ತಾರೀಖು 26ನೆ ಫೆಬ್ರವರಿ 1907.

ನಂ. 7380—ಸ್ಯಾನಿಟೆರಿ. 129-06—6, ಶಿವಮೊಗ್ಗ ಡಿಸ್ಟ್ರಿಕ್ಟು ಶಿವಮೊಗ್ಗ ತಾಲ್ಲೂಕಿನ ಕೂಡ್ಲಿ ಗ್ರಾಮಕ್ಕೆ ಶ್ರೀ ಸಂಗಮೇಶ್ವರ ಜಾತ್ರೆ ಕಾಲದಲ್ಲಿ ಪ್ಲೇಗು ತಗುಲಿರುವ ಪ್ರದೇಶಗಳಿಂದ ಬರುವ ಜನರು ಅಲ್ಲಿ ಗುಂಪು ಸೇರುವುದಕ್ಕೆ ಅವಕಾಶಕೊಟ್ಟರೆ ಅಲ್ಲಿ ಪ್ಲೇಗು ರೋಗವು ಆರಂಭವಾಗುವ ಅಪಾಯವಿರುವುದಾಗಿ ಮೈಸೂರು ಶ್ರೀಮನ್ ಮಹಾರಾಜರವರ ಸರ್ಕಾರದವರಿಗೆ ತೃಪ್ತಿಕರವಾದ ಕಾರಣಗಳು ಕಂಡುಬಂದಿರುವುದರಿಂದ—

1897ನೆಯ ವರ್ಷದ 2ನೆಯ ನಂಬರ್ ಎಪಿಡೆಮಿಕ್ ಡಿಸೀಸೆಸ್ ರೆಗ್ಯುಲೇಷನ್ಸ್ ಎಂಬ ಸಾಂಕ್ರಾಮಿಕ ಜಾಡ್ಯಗಳ ಸಂಬಂಧವಾದ ಕಾನೂನಿಂದ ತಮಗೆ ಕೊಡಲ್ಪಟ್ಟಿರುವ ಅಧಿಕಾರಗಳನ್ನು ನಡೆಸುವುದರಲ್ಲಿ ಮೈಸೂರು ಶ್ರೀಮನ್ ಮಹಾರಾಜರವರ ಸರ್ಕಾರದವರು 1907ನೆಯ ವರ್ಷದ ಮಾರ್ಚಿ 15ನೆ ತಾರೀಖಿನಿಂದ 1907ನೆ ಇಸವಿ ಮಾರ್ಚಿ 22ನೆ ತಾರೀಖಿನ ವರೆಗೆ (ಉಭಯ ದಿನಗಳೂ ಸೇರಿ) ಪ್ಲೇಗು ತಗುಲಿರುವ ಪ್ರದೇಶಗಳಿಂದ ಜನರು ಅಲ್ಲಿಗೆ ಬರಕೂಡದೆಂದು ನಿಷೇಧಿಸಿರುತ್ತಾರೆ.

ಈ ಇಸ್ತಿಹಾರ್‌ನಾಮೆಗೆ ವಿರೋಧವಾಗಿ ಮೇಲ್ಕಂಡ ಜಾತ್ರೆಗೆ ಹೋಗುವ ಜನರು ಹಿಂದಕ್ಕೆ ಕಳುಹಿಸಲ್ಪಡುವರು.

ತಾರೀಖು 28ನೆ ಫೆಬ್ರವರಿ 1907.

ನಂ. 7383—ಸ್ಯಾನಿಟೆರಿ 66–06—32, ಸಮಸ್ತ ಜನರ ತಿಳಿವಳಿಕೆಯ ಬಗ್ಗೆ ಇದರಿಂದ ಪ್ರಸಿದ್ಧಪಡಿಸುವುದೇನೆಂದರೆ :— ಹಾಸನ ಡಿಸ್ಟ್ರಿಕ್ಟಿನಲ್ಲಿರುವ ಇದರಡಿ ನಮೂದಿಸಿರುವ ಪ್ರದೇಶವು ಎಪಿಡೆಮಿಕ್ ಡಿಸೀಸೆಸ್ ರೆಗ್ಯುಲೇಷನ್ ಎಂಬ ಸಾಂಕ್ರಾಮಿಕ ಜಾಡ್ಯಗಳಿಗೆ ಸಂಬಂಧಪಟ್ಟ ಕಾನೂನನ್ನು ಅನುಸರಿಸಿ 1898ನೆಯ ವರ್ಷದ ಫೆಬ್ರವರಿ 10ನೆಯ ತಾರೀಖಿನ ನಂಬರ್ 9385—ಮಿಸಲೇನಿಯಸ್ ಫೈಲ್ 21—96 ಮತ್ತು ನಂಬರ್ 9384—ಮಿಸ್ಟಲೇನಿಯಸ್ ಫೈಲ್ 21–96 ಈ ನಂಬರುಗಳ ಇಸ್ತಿಹಾರ್‌ನಾಮೆಗಳೊಡನೆ ಪ್ರಕಟಿಸಲ್ಪಟ್ಟ ರೆಗ್ಯುಲೇಷನುಗಳ ಉದ್ದೇಶಾರ್ಥಗಳಿಗಾಗಿ ಪ್ಲೇಗು ತಗುಲಿದ ಪ್ರದೇಶವೆಂದು ಎಣಿಸಲ್ಪಡುವುದು.

ಸ್ಥಳ.	ತಾಲ್ಲೂಕು.
ಗೊಲ್ಲರಹೊಸಹಳ್ಳಿ	ಜನ್ನರಾಯಪಟ್ಟಣ.

ತಾರೀಖು 5ನೆ ಮಾರ್ಚಿ 1907.

ನಂ. 7587—ಸ್ಯಾನಿಟೆರಿ 156–06—12, ಕೋಲಾರ ಡಿಸ್ಟ್ರಿಕ್ಟು ಬೌರಿಂಗ್‌ಪೇಟೆ ತಾಲ್ಲೂಕಿನ ಬೌರಿಂಗ್‌ಪೇಟೆಗೆ ಶ್ರೀ ಕೋದಂಡ ರಾಮಸ್ವಾಮಿಯವರ ರಥೋತ್ಸವ ಮತ್ತು ದನಗಳ ಸಂತೆ ಕಾಲದಲ್ಲಿ ಪ್ಲೇಗು ತಗುಲಿರುವ ಪ್ರದೇಶಗಳಿಂದ ಬರುವ ಜನರು ಅಲ್ಲಿ ಗುಂಪು ಸೇರುವುದಕ್ಕೆ ಅವಕಾಶಕೊಟ್ಟರೆ ಅಲ್ಲಿ ಪ್ಲೇಗು ರೋಗವು ಆರಂಭವಾಗುವ ಅಪಾಯವಿರುವುದಾಗಿ ಮೈಸೂರು ಶ್ರೀಮನ್ ಮಹಾರಾಜರವರ ಸರ್ಕಾರದವರಿಗೆ ತೃಪ್ತಿಕರವಾದ ಕಾರಣಗಳು ಕಂಡುಬಂದಿರುವುದರಿಂದ—

1897ನೆಯ ವರ್ಷದ 2ನೆಯ ನಂಬರ್ ಎಪಿಡೆಮಿಕ್ ಡಿಸೀಸೆಸ್ ರೆಗ್ಯುಲೇಷನ್ಸ್ ಎಂಬ ಸಾಂಕ್ರಾಮಿಕ ಜಾಡ್ಯಗಳ ಸಂಬಂಧವಾದ ಕಾನೂನಿಂದ ತಮಗೆ ಕೊಡಲ್ಪಟ್ಟಿರುವ ಅಧಿಕಾರಗಳನ್ನು ನಡೆಸುವುದರಲ್ಲಿ ಮೈಸೂರು ಶ್ರೀಮನ್ ಮಹಾರಾಜರವರ ಸರ್ಕಾರದವರು, 1907ನೆಯ ವರ್ಷದ ಮೇ 25ನೆ ತಾರೀಖಿನಿಂದ 1907ನೆ ಜೂನ್ 5ನೆ ತಾರೀಖಿನವರೆಗೆ (ಉಭಯ ದಿನಗಳೂ ಸೇರಿ) ಪ್ಲೇಗು ತಗುಲಿರುವ ಪ್ರದೇಶಗಳಿಂದ ಜನರು ಅಲ್ಲಿಗೆ ಬರಕೂಡದೆಂದು ನಿಷೇಧಿಸಿರುತ್ತಾರೆ.

ಈ ಇಸ್ತಿಹಾರ್‌ನಾಮೆಗೆ ವಿರೋಧವಾಗಿ ಮೇಲ್ಕಂಡ ರಥೋತ್ಸವ ಮತ್ತು ದನಗಳ ಸಂತೆಗಳಿಗೆ ಹೋಗುವ ಜನರು ಹಿಂದಕ್ಕೆ ಕಳುಹಿಸಲ್ಪಡುವರು.

ತಾರೀಖು 5ನೆ ಮಾರ್ಚಿ 1907.

ನಂ. 7589 – ಸ್ಯಾನಿಟೆರಿ 170–06–10, ಮೈಸೂರು ಡಿಸ್ಟ್ರಿಕ್ಟು ಫ್ರಂಚ್‌ರಾಕ್ಸ್ ಸಬ್ ತಾಲ್ಲೂಕಿನ ಮೇಲ್‌ಕೋಟೆಗೆ ವೈರಮುಡಿ ಜಾತ್ರೆ ಕಾಲದಲ್ಲಿ ಪ್ಲೇಗು ತಗುಲಿರುವ ಪ್ರದೇಶಗಳಿಂದ ಬರುವ ಜನರು ಅಲ್ಲಿ ಗುಂಪು ಸೇರುವುದಕ್ಕೆ ಅವಕಾಶ ಕೊಟ್ಟರೆ ಅಲ್ಲಿ ಪ್ಲೇಗು ರೋಗವು ಆರಂಭವಾಗುವ ಅಪಾಯವಿರುವುದಾಗಿ ಮೈಸೂರು ಶ್ರೀಮನ್ ಮಹಾರಾಜರವರ ಸರ್ಕಾರದವರಿಗೆ ತೃಪ್ತಿಕರವಾದ ಕಾರಣಗಳು ಕಂಡುಬಂದಿರುವುದರಿಂದ—

1897ನೆಯ ವರ್ಷದ 2ನೆಯ ನಂಬರ್ ಎಪಿಡೆಮಿಕ್ ಡಿಸೀಸೆಸ್ ರೆಗ್ಯುಲೇಷನ್ಸ್ ಎಂಬ ಸಾಂಕ್ರಾಮಿಕ ಜಾಡ್ಯಗಳ ಸಂಬಂಧವಾದ ಕಾನೂನಿಂದ ತಮಗೆ ಕೊಡಲ್ಪಟ್ಟಿರುವ ಅಧಿಕಾರಗಳನ್ನು ನಡೆಸುವುದರಲ್ಲಿ ಮೈಸೂರು ಶ್ರೀಮನ್ ಮಹಾರಾಜರವರ ಸರ್ಕಾರದವರು 1907ನೆಯ ವರ್ಷದ ಮಾರ್ಚಿ 20ನೆ ತಾರೀಖಿನಿಂದ 30ನೆ ತಾರೀಖಿನ ವರೆಗೆ (ಉಭಯ ದಿನಗಳೂ ಸೇರಿ) ಪ್ಲೇಗು ತಗುಲಿರುವ ಪ್ರದೇಶಗಳಿಂದ ಜನರು ಅಲ್ಲಿಗೆ ಬರಕೂಡದೆಂದು ನಿಷೇಧಿಸಿರುತ್ತಾರೆ.

ಈ ಇಸ್ತಿಹಾರ್‌ನಾಮೆಗೆ ವಿರೋಧವಾಗಿ ಮೇಲ್ಕಂಡ ಜಾತ್ರೆಗೆ ಹೋಗುವ ಜನರು ಹಿಂದಕ್ಕೆ ಕಳುಹಿಸಲ್ಪಡುವರು.